ಇಂದು ದಿನಾಂಕಃ **23.03.2021** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

ಮುಂದುವರಿದ ಪಾಟೀ ಸವಾಲುಃ ಶ್ರೀ ಸಿ.ಆರ್. ವಾದಿಪರ ವಕೀಲರಿಂದಃ ನನ್ನ ತಾತ ಖರೀದಿಸಿರುವ ಆಸ್ತಿಯನ್ನು ಯಾರಿಂದ ಯಾವಾಗ ಖರೀದಿಸಿರುತ್ತಾರೆ ಎಂದರೆ ಗೊತ್ತಿಲ್ಲ. ನನ್ನ ತಾತ ಖರೀದಿಸಿರುವ ಆಸ್ತಿಯ ಪಂಚಾಯಿತಿ ಸಂ. **1026** ಎಂದರೆ ಸರಿ. ನಮ್ಮ ಊರಿನಲ್ಲಿ ಬಸ್ ನಿಲ್ದಾಣ ಈಗ್ಗೆ **3-4** ವರ್ಷಗಳ ಹಿಂದೆ ಆಗಿರುತ್ತದೆ. **2009** ರಲ್ಲಿಯೇ ಬಸ್ ನಿಲ್ದಾಣ ನಿರ್ಮಾಣವಾಗಿತ್ತು ಎಂದರೆ ಸರಿಯಲ್ಲ. ದಾವಾಸ್ತಿಯನ್ನು ಹೊಡೆದುಕೊಳ್ಳಬೇಕು ಎಂಬ ಉದ್ದೇಶದಿಂದ ನಾನು ಮತ್ತು ಇತರೆ ಪ್ರತಿವಾದಿಗಳು ಸೇರಿ ದಾವಾಸ್ತಿಯಲ್ಲಿ ಕಟ್ಟಡ ನಿರ್ಮಾಣವನ್ನು **2010-2011** ರಲ್ಲಿ ಪ್ರಾರಂಭಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ಓ.ಎಸ್ **272/2009** ರಲ್ಲಿ ನನ್ನನ್ನು ಪಕ್ಷಗಾರರನ್ನಾಗಿ ಸೇರಿಸಿರುತ್ತಾರೆ ಎಂದರೆ ಗೊತ್ತಿಲ್ಲ. ಸದರಿ ದಾವೆಯಲ್ಲಿನ ಆಸ್ತಿಯಲ್ಲಿ ಯಾವುದೇ ಕಟ್ಟಡ ನಿರ್ಮಾಣ ಮಾಡಬಾರದೆಂದು ನ್ಯಾಯಾಲಯ ಆದೇಶಿಸಿರುತ್ತದೆ ಎಂದರೆ ಸರಿ. ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿ ಕಟ್ಟಡ ಕಟ್ಟಿದ್ದರಿಂದ ನನ್ನ ಮತ್ತು **1** ನೇ ಪ್ರತಿವಾದಿಯ ವಿರುದ್ಧ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ ಎಂದರೆ ಸರಿಯಲ್ಲ. ಈ ವಿಚಾರದಲ್ಲಿ ಪೊಲೀಸರು ನಮ್ಮನ್ನು ಠಾಣೆಗೆ ಕರೆಸಿ ಕಟ್ಟಡ ಕಟ್ಟಬಾರದೆಂದು ತಿಳಿಸಿರುತ್ತಾರೆ ಎಂದರೆ ಗೊತ್ತಿಲ್ಲ. ನ್ಯಾಯಾಲಯದ ಆದೇಶದ ಪ್ರಕಾರ ಪಂಚಾಯಿತಿಯವರು ನೀಡಿದ್ದ ಕಟ್ಟಡದ ಪರವಾನಗಿಯನ್ನು ರದ್ದುಗೊಳಿಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರಗಳೂ ಗೊತ್ತಿದ್ದರೂ ಸಹ ವಾದಿಗಳ ಆಸ್ತಿಯನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹೌಸ್ ಲೀಸ್ಟ್ ನಂ **31/1**, ವಿಸ್ತೀರ್ಣ **33*16 1/2** ಗಜ ಆಸ್ತಿ ಈಗಲೂ ಸಹ ಸಿದ್ದಾಚಾರ್ ಬಿನ್ ದೊಡ್ಡತಮ್ಮಯ್ಯರವರ ಹೆಸರಿನಲ್ಲಿದೆ ಎಂದರೆ ಸರಿಯಲ್ಲ. ದಾವಾಸ್ತಿಯಲ್ಲಿ ನನಗಾಗಲೀ ಇತರೆ ಪ್ರತಿವಾದಿಗಳಿಗಾಗಲೀ ಯಾವುದೇ ಹಕ್ಕು ಹಿತಾಸಕ್ತಿ ಇಲ್ಲದೇ ಇದ್ದರೂ ಸಹ ಅಕ್ರಮವಾಗಿ ಆಸ್ತಿಯನ್ನು ಹೊಡೆದುಕೊಳ್ಳುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾಸ್ತಿ ನಮಗೆ ಸೇರಿಬೇಕೆಂದು ಯಾವುದೇ ದಾಖಲೆಯನ್ನು

ಹಾಜರು ಮಾಡದೇ ಇದ್ದರೂ ಸಹ ಹಾಜರು ಮಾಡಿದ್ದೇವೆ ಎಂದು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ: ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಹುಣಸೂರು.